**ಪುತ್ತೂರು ತಾಲ್ಲೂಕಿನ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಮತ್ತು ಭೋಧಕ ಸಿಬ್ಬಂದಿ ವರ್ಗದ ವಿವರಗಳು**

102 (123) : ಶ್ರೀಮತಿ ಶಕುಂತಲಾ ಟಿ. ಶೆಟ್ಟಿ (ಪುತ್ತೂರು) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪುತ್ತೂರು ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಯಾವ ಯಾವ ವಿಷಯಗಳ ಬೋಧಕ ವಿಭಾಗಗಳು ಇವೆ ಹಾಗೂ ಪ್ರತಿ ವಿಭಾಗಗಳಲ್ಲಿ ಎಷ್ಟೆಷ್ಟು ಜನ ವಿದ್ಯಾರ್ಥಿಗಳು ಅಭ್ಯಾಸಿಸುತ್ತಿದ್ದಾರೆ;

ಆ) ಅಲ್ಲಿರುವ ಬೋಧಕ ಸಿಬ್ಬಂದಿಯ ಸಂಖ್ಯೆ ಎಷ್ಟು;

ಇ) ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಕೊಠಡಿಯ ವ್ಯವಸ್ಥೆ ಇದೆಯೇ; ಇದ್ದಲ್ಲಿ ಒಟ್ಟು ಕೊಠಡಿಗಳ ಸಂಖ್ಯೆ ಎಷ್ಟು;

ಈ) ಸದರಿ ಕಾಲೇಜಿನಲ್ಲಿ ಕೊಠಡಿಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದ್ದು ಅದನ್ನು ಸರಿಪಡಿಸಲು ಕೈಗೊಂಡ ಪರಿಹಾರ ವ್ಯವಸ್ಥೆಗಳ ವಿವರಗಳೇನು;

ಉ) ಪುತ್ತೂರು ತಾಲ್ಲೂಕು ಬೆಟ್ಟಂಪಾಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಸಂಪೂರ್ಣವಾಗದೆ ಅಪೂರ್ಣ ಸ್ಥಿತಿಯಲ್ಲಿರಲು ಕಾರಣವೇನು;

ಊ) ಈ ಕಟ್ಟಡವನ್ನು ಯಾವಾಗ ಪೂರ್ಣ ಮಾಡಲಾಗುವುದು?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು)

ಅ) ಪುತ್ತೂರು ತಾಲ್ಲೂಕಿನ ಬೆಟ್ಟಂಪಾಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಲಾ ವಿಭಾಗ ಮಾತ್ರ ಇರುತ್ತದೆ. 128 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುತ್ತಾರೆ.

ಆ) 4 ಜನ ಬೋಧಕ ಸಿಬ್ಬಂದಿಯಿರುತ್ತಾರೆ.

ಇ) ಹೌದು. ಒಟ್ಟು 6 ಬೋಧನಾ ಕೊಠಡಿಗಳಿವೆ.

ಈ) ಸದರಿ ಕಾಲೇಜಿನಲ್ಲಿ ಪ್ರಸಕ್ತ ಸಾಲಿನಲ್ಲಿ 128 ವಿದ್ಯಾರ್ಥಿಗಳಿದ್ದು ಈ ಸಂಖ್ಯೆಗೆ ಇರುವ ಕೊಠಡಿಗಳೇ ಸಾಕಾಗುತ್ತದೆ.

ಉ) ಆಯವ್ಯಯದಲ್ಲಿ ಅನುದಾನದ ಕೊರತೆಯಿಂದಾಗಿ ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲ.

ಊ) ಪ್ರಸಕ್ತ ಸಾಲಿನಲ್ಲಿ ಸದರಿ ಕಾಲೇಜಿನಲ್ಲಿ ಕೇವಲ 128 ವಿದ್ಯಾರ್ಥಿಗಳು ಮಾತ್ರ ಇದ್ದು, ಮುಂದೆ ದೊರೆಯುವ ಅನುದಾನವನ್ನು ನೋಡಿಕೊಂಡು ಕಟ್ಟಡವನ್ನು ಪೂರ್ಣಗೊಳಿಸಲು ಕ್ರಮಕ್ಕೆಗೊಳ್ಳಲಾಗುತ್ತದೆ.

**ಗೌರಿಬಿದನೂರು ತಾಲ್ಲೂಕಿನಲ್ಲಿ ಪಶು-ಆರೋಗ್ಯ ಕೇಂದ್ರಗಳ ಮಂಜೂರಾತಿ**

103 (267) : ಶ್ರೀ ಶಿವಶಂಕರ್ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೋಲಾರ ಜಿಲ್ಲೆ, ಗೌರಿಬಿದನೂರು ತಾಲ್ಲೂಕಿನಾದ್ಯಂತ ಜಾನುವಾರುಗಳ ಸಂಖ್ಯೆಯು ಅಧಿಕವಾಗಿದ್ದು, ಪಶು ಆರೋಗ್ಯ ಕೇಂದ್ರಗಳು ಇಲ್ಲದೇ ಜಾನುವಾರುಗಳ ಚಿಕಿತ್ಸೆಗೆ ಬಹು ದೂರ ಹೋಗಿ ಚಿಕಿತ್ಸೆಯನ್ನು ಕೊಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;